ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-

747 (916) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ;

(ಆ) ಹಾಗಿದ್ದಲ್ಲಿ, ಪ್ರಸ್ತುತ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು ; (ಪದವಿ ಕಾಲೇಜುಗಳ ಹುದ್ದೆವಾರು ವಿವರ ನೀಡುವುದು)

(ಇ) ಈಗಾಗಲೇ ಶಿಕ್ಷಣ ಸಂಸ್ಥೆಗಳು ಹುದ್ದೆಗಳನ್ನು ಇಲಾಖೆಯ ನಿಯಮಗಳಿಗನುಗುಣವಾಗಿ ಅಧಿಸೂಚನೆ ಹೊರಡಿಸಿ, ನೇಮಕ ಮಾಡಿ ವೇತನ ಪಡೆಯುವ ಹಂತಕ್ಕೆ ಬಂದಿರುವ ಪ್ರಸ್ತಾವನೆಗಳು ಎಷ್ಟು ; ಮತ್ತು ಅವು ಯಾವುವು ; (ಶಿಕ್ಷಣ ಸಂಸ್ಥೆವಾರು ಪದವಿ ಕಾಲೇಜುಗಳ ವಿವರ ನೀಡುವುದು)

(ಈ) ಈಗಾಗಲೇ ಹುದ್ದೆ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮತಿ ದೊರೆತಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು)

(ಉ) ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಅಥವಾ ಸಡಿಲಗೊಳಿಸುವಂತೆ ಈಗಾಗಲೇ ಪ್ರಸ್ತಾವನೆಯನ್ನು ಉನ್ನತ ಶಿಕ್ಷಣ ಇಲಾಖೆಯು ಮಂಡಿಸಿದೆಯೇ ; ಪ್ರಸ್ತಾವನೆಯು ಯಾವ ಹಂತದಲ್ಲಿದೆ ; (ಶಿಫಾರಸ್ಸುಗಳ ಪ್ರತಿ ನೀಡುವುದು)

(ಊ) ಆದೇಶವನ್ನು ಸಡಿಲಗೊಳಿಸಿ ಖಾಲಿ ಹುದ್ದೆಗಳ ಭರ್ತಿಗೆ ಹಾಗೂ ವೇತನದ ಹಂತಕ್ಕೆ ಬಂದ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನ ಬಿಡುಗಡೆಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?